# All India Radio: Bangalore
# National Bulletin In Kannada
# 19.03.2026  19.35 hrs
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು
## 19.03.2026  19.35 hrs
***************

ಮುಖ್ಯಾಂಶಗಳು

೧. ಫ್ರಾನ್ಸ್, ಓಮನ್ ಮತ್ತು ಮಲೇಷಿಯಾ ನಾಯಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಉನ್ನತ ಮಟ್ಟದ ಮಾತುಕತೆ - ಪಶ್ಚಿಮ ಏಷ್ಯ ಪರಿಸ್ಥಿತಿ ಬಗ್ಗೆ ಸಮಾಲೋಚನೆ

೨. ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಪುನರುತ್ಥಾನದ ಹಾದಿಯಲ್ಲಿ ಭಾರತ - ರಾಷ್ಟ್ರಪತಿ ದ್ರೌಪದಿ ಮುರ್ಮು

೩. ದೇಶಾದ್ಯಂತ ಸಿಎನ್‌ಜಿ-ಪಿಎನ್‌ಜಿ ಅನಿಲ ಪೂರೈಕೆ ಶೇಕಡ ೧೦೦ ರಷ್ಟು ಖಚಿತ; ಕೇಂದ್ರ ಸರ್ಕಾರದಿಂದ ಮಾಹಿತಿ

೪. ರಾಷ್ಟ್ರವನ್ನು ಸ್ವದೇಶಿ ಡ್ರೋಣ್ ಉತ್ಪಾದನೆಯ ಜಾಗತಿಕ ಕೇಂದ್ರವಾಗಿಸಲು ಕಾರ್ಯೋನ್ಮುಖರಾಗುವಂತೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕರೆ

೫. ಆರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿ; ಪುರುಷರ ಡಬಲ್ಸ್‌ನಲ್ಲಿ ಅರ್ಜುನ್-ಅಂಸಕರುಣನ್ ಜೋಡಿ ಕ್ವಾರ್ಟರ್ ಫೈನಲ್ ಪ್ರವೇಶ

***************

ಪ್ರಧಾನಿ ನರೇಂದ್ರ ಮೋದಿ ಅವರಿಂದು ಫ್ರಾನ್ಸ್ ಅಧ್ಯಕ್ಷ ಇಮ್ಯಾನ್ಯುಯಲ್ ಮ್ಯಾಕ್ರಾನ್ ಅವರೊಂದಿಗೆ ಮಾತುಕತೆ ನಡೆಸಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, ಸಭೆಯ ವೇಳೆ ಪಶ್ಚಿಮ ಏಷ್ಯ ಪರಿಸ್ಥಿತಿ ಹಾಗೂ ಉದ್ವಿಗ್ನತೆಯನ್ನು ಶಮನಗೊಳಿಸುವ ತುರ್ತು ಅಗತ್ಯದ ಕುರಿತು ಚರ್ಚೆ ನಡೆಸಲಾಗಿದೆ ಎಂದಿದ್ದಾರೆ.

ಆ ಪ್ರದೇಶದಲ್ಲಿ ಮತ್ತು ಈಚೇಗೆ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಲು ಸಮನ್ವಯ ಮುಂದುವರೆಸಲು ಉಭಯ ನಾಯಕರು ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ.

ಇದರ ಜೊತೆಗೆ ಪ್ರಧಾನಿ, ಓಮನ್‌ನ ಸುಲ್ತಾನ ಹೈತಮ್ ಬಿನ್ ತಾರೀಕ್ ಮತ್ತು ಮಲೇಷಿಯಾ ಪ್ರಧಾನಿ ಅನ್ವರ್ ಇಬ್ರಾಹಿಮ್ ಅವರೊಂದಿಗೂ ಮಾತುಕತೆ ನಡೆಸಿದ್ದಾರೆ. ಈ ಪ್ರತ್ಯೇಕ ಸಭೆಗಳಲ್ಲಿ ಪ್ರಧಾನಿ ಇಬ್ಬರೂ ನಾಯಕರೊಂದಿಗೆ ಪಶ್ಚಿಮ ಏಷ್ಯದ ಉಲ್ಬಣ ಪರಿಸ್ಥಿತಿ ಹಾಗೂ ಆ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯ ಪುನರ್‌ಸ್ಥಾಪನೆ ಕುರಿತು ಚರ್ಚೆ ನಡೆಸಿದ್ದಾರೆ.

***************

ಭಾರತ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಪುನರುತ್ಥಾನದ ಹಾದಿಯಲ್ಲಿದ್ದು, ಅಯೋಧ್ಯೆಯ ಶ್ರೀರಾಮ ಮಂದಿರ ಇದರ ಸಂಕೇತವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದ್ದಾರೆ.

ಉತ್ತರ ಪ್ರದೇಶದ ಮೂರು ದಿನಗಳ ಪ್ರವಾಸದಲ್ಲಿರುವ ಅವರು, ರಾಮ ಜನ್ಮ ಭೂಮಿ ಮಂದಿರದ ಎರಡನೇ ಮಹಡಿಯಲ್ಲಿ ನಡೆದ ಪವಿತ್ರ ಶ್ರೀರಾಮ ಯಂತ್ರ ಸ್ಥಾಪನ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದ ಏಳಿಗೆಗಾಗಿ ಪ್ರಾರ್ಥಿಸುವುದು ಮತ್ತು ಶ್ರೀರಾಮನನ್ನು ಪೂಜಿಸುವುದು, ಒಂದೇ ರೀತಿಯ ಭಾವನೆಗಳನ್ನು ಒಳಗೊಂಡಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರಪತಿಗಳು ಮಂದಿರ ನಿರ್ಮಾಣ ಕಾರ್ಯದಲ್ಲಿ ಶ್ರಮಿಸಿದ ಕಾರ್ಮಿಕರನ್ನು ಸನ್ಮಾನಿಸಿ ಗೌರವಿಸಿದರು.

***************

ದೇಶಾದ್ಯಂತ ಸಾರಿಗೆ ಮತ್ತು ಮನೆಬಳಕೆಯ ಅನಿಲಗಳಾದ ಸಿಎನ್‌ಜಿ ಮತ್ತು ಪಿಎನ್‌ಜಿ ಪೂರೈಕೆಯನ್ನು ಶೇಕಡ ೧೦೦ ರಷ್ಟು ಖಚಿತಪಡಿಸಲಾಗಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಎರಡು ವಾರಗಳಲ್ಲಿ ೧.೨೫ ಲಕ್ಷಕ್ಕೂ ಹೆಚ್ಚು ಹೊಸ ಸಂಪರ್ಕಗಳನ್ನು ನೀಡಲಾಗಿದ್ದು, ಕೇವಲ ಮೂರು ದಿನಗಳಲ್ಲಿ ೫ ಸಾವಿರದ ೬೦೦ ಗ್ರಾಹಕರು ಪಿಎನ್‌ಜಿಗೆ ಬದಲಾಗಿದ್ದಾರೆ. ವಾಣಿಜ್ಯ ಎಲ್‌ಪಿಜಿ ಪೂರೈಕೆಯನ್ನು ಎಲ್ಲಾ ರಾಜ್ಯಗಳಿಗೂ ವಿಸ್ತರಿಸಲಾಗಿದ್ದು, ಪಿಎನ್‌ಜಿ ಜಾಲದ ವಿಸ್ತರಣೆಗೆ ಸಹಕರಿಸುವಂತೆ ರಾಜ್ಯ ಸರ್ಕಾರಗಳಿಗೆ ಕೇಂದ್ರ ಮನವಿ ಮಾಡಿದೆ ಎಂದು ತಿಳಿಸಿದರು.

ಅಕ್ರಮ ದಾಸ್ತಾನು ಮತ್ತು ಕಾಳಸಂತೆ ತಡೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ರಾಜ್ಯಗಳಿಗೆ ಸೂಚಿಸಿದ ಅವರು, ಸದ್ಯ ಎಲ್‌ಪಿಜಿ ಲಭ್ಯತೆಯ ಬಗ್ಗೆ ಆತಂಕಪಡುವ ಅಗತ್ಯವಿಲ್ಲ ಮತ್ತು ಪೂರೈಕೆ ಸ್ಥಗಿತಗೊಳ್ಳುವ ಅಪಾಯವಿಲ್ಲ ಎಂದು ಸ್ಪಷ್ಟಪಡಿಸಿದರು.

ಧ್ವನಿ: ಸುಜಾತ ಶರ್ಮಾ

ಬಳಿಕ ಮಾತನಾಡಿದ ವಿದೇಶಾಂಗ ಸಚಿವಾಲಯದ ಗಲ್ಫ್ ವಲಯದ ಜಂಟಿ ಕಾರ್ಯದರ್ಶಿ ಅಸೀಮ್ ಮಹಾಜನ್ ಫೆಬ್ರವರಿ ೨೮ ರಿಂದೀಚೆಗೆ ಸುಮಾರು ೨ ಲಕ್ಷದ ೮೦ ಸಾವಿರ ಪ್ರಯಾಣಿಕರು ಪಶ್ಚಿಮ ಏಷ್ಯ ಪ್ರದೇಶದಿಂದ ಭಾರತಕ್ಕೆ ಮರಳಿದ್ದಾರೆ ಎಂದು ತಿಳಿಸಿದರು.

***************

ಗಲ್ಫ್ ಪ್ರದೇಶದ ಇಂಧನ ಸ್ಥಾವರಗಳ ಮೇಲೆ ಇತ್ತೀಚೆಗೆ ನಡೆಯುತ್ತಿರುವ ದಾಳಿಗಳು ಆತಂಕಕಾರಿಯಾಗಿದ್ದು, ಜಾಗತಿಕ ಇಂಧನ ಭದ್ರತೆಗೆ ಧಕ್ಕೆ ತರುವ ಅಪಾಯವಿದೆ ಎಂದು ಭಾರತ ಕಳವಳ ವ್ಯಕ್ತಪಡಿಸಿದೆ.

ಈ ಕುರಿತು ನವದೆಹಲಿಯಲ್ಲಿಂದು ಮಾತನಾಡಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಇಂತಹ ದಾಳಿಗಳು ತಕ್ಷಣವೇ ನಿಲ್ಲಬೇಕು ಎಂದು ಆಗ್ರಹಿಸಿದರು. ಇಂಧನ ಪೂರೈಕೆ ಮತ್ತು ಹಡಗು ಸಂಚಾರ ಮಾರ್ಗಗಳ ಮೇಲಾಗುತ್ತಿರುವ ಪರಿಣಾಮಗಳ ಬಗ್ಗೆ ಸರ್ಕಾರವು ತೀವ್ರ ನಿಗಾ ಇರಿಸಿದೆ ಎಂದು ಅವರು ತಿಳಿಸಿದರು.

ದೇಶದಲ್ಲಿ ಎಲ್‌ಪಿಜಿ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಆದ್ಯತೆ ನೀಡುತ್ತಿದ್ದು, ದೇಶೀಯ ಗ್ರಾಹಕರಿಗೆ ತೊಂದರೆಯಾಗದಂತೆ ಇಂಧನ ಮೂಲಗಳನ್ನು ವೈವಿಧ್ಯಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಪಶ್ಚಿಮ ಏಷ್ಯಾದ ಪ್ರಸಕ್ತ ಪರಿಸ್ಥಿತಿಯ ಬಗ್ಗೆ ಭಾರತವು ಜಾಗತಿಕ ನಾಯಕರೊಂದಿಗೆ ಸಂಪರ್ಕದಲ್ಲಿದ್ದು, ತನ್ನ ಸ್ಪಷ್ಟ ನಿಲುವನ್ನು ತಿಳಿಸಿದೆ. ಇದೇ ವೇಳೆ, ನೆರೆಯ ರಾಷ್ಟ್ರಗಳಾದ ಬಾಂಗ್ಲಾದೇಶ, ಶ್ರೀಲಂಕಾ ಮತ್ತು ಮಾಲ್ಡೀವ್ಸ್ ಭಾರತದಿಂದ ಇಂಧನ ನೆರವನ್ನು ಕೋರಿವೆ ಎಂದು ವಿದೇಶಾಂಗ ವಕ್ತಾರರು ಮಾಹಿತಿ ನೀಡಿದರು.

***************

ಮುಂದಿನ ಕೆಲವು ವರ್ಷಗಳಲ್ಲಿ ಭಾರತ ಸ್ವದೇಶಿ ಡ್ರೋಣ್ ಉತ್ಪಾದನೆಯ ಜಾಗತಿಕ ಕೇಂದ್ರವಾಗಿ ಹೊರಹೊಮ್ಮಲು ಕಾರ್ಯೋನ್ಮುಖವಾಗಬೇಕು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ರಕ್ಷಣಾ ಕೈಗಾರಿಕಾ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಸ್ತುತ ಜಾಗತಿಕ ಅನಿಶ್ಚಿತತೆಗಳ ನಡುವೆ ಕಾರ್ಯತಂತ್ರದ ಸ್ವಾಯತ್ತತೆಯನ್ನು ಖಚಿತಪಡಿಸಲು ಹಾಗೂ ರಕ್ಷಣಾ ಸಿದ್ಧತೆಯನ್ನು ಹೆಚ್ಚಿಸಲು ಡ್ರೋನ್ ಉತ್ಪಾದನಾ ವ್ಯವಸ್ಥೆಯನ್ನು ಬಲಪಡಿಸುವುದು ಅತ್ಯಗತ್ಯ ಎಂದರು.

ಭಾರತದ ತಾಂತ್ರಿಕ ಸಾಮರ್ಥ್ಯವನ್ನು ಹೆಚ್ಚಿಸುವಲ್ಲಿ ಮತ್ತು ರಾಷ್ಟ್ರೀಯ ಆರ್ಥಿಕತೆಗೆ ಗಣನೀಯ ಕೊಡುಗೆ ನೀಡುವಲ್ಲಿ ಸ್ಥಳೀಯ ಉದ್ಯಮಿಗಳು, ನವೋದ್ಯಮಗಳು ಮತ್ತು ನಾವೀನ್ಯಕಾರರು ನಿರ್ಣಾಯಕ ಪಾತ್ರ ವಹಿಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ಕೃತಕ ಬುದ್ಧಿಮತ್ತೆ, ಆಟೋಮೇಷನ್, ರೊಬೊಟಿಕ್ಸ್ ಮತ್ತು ಇತರ ಸುಧಾರಿತ ತಂತ್ರಜ್ಞಾನಗಳಂತಹ ಉದಯೋನ್ಮುಖ ಕ್ಷೇತ್ರಗಳಲ್ಲಿ ಹಲವಾರು ಎಂಎಸ್‌ಎಂಇಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ ಎಂದರು.

ಸಶಸ್ತ್ರ ಪಡೆಗಳಿಗೆ ನವೀನ ಪರಿಹಾರಗಳನ್ನು ಅಭಿವೃದ್ಧಿಪಡಿಸಲು ನವೋದ್ಯಮಗಳು ಮತ್ತು ಎಂಎಸ್‌ಎಂಇಗಳನ್ನು ಪ್ರೋತ್ಸಾಹಿಸುವ 'ಐಡೆಕ್ಸ್' ವೇದಿಕೆ ಪ್ರಾಮುಖ್ಯತೆಯನ್ನು ರಕ್ಷಣಾ ಸಚಿವರು ಇದೇ ಸಂದರ್ಭದಲ್ಲಿ ವಿವರಿಸಿದರು.

ಎಂಎಸ್‌ಎಂಇಗಳನ್ನು ಆರ್ಥಿಕತೆಯ ಬೆನ್ನೆಲುಬು ಎಂದು ಬಣ್ಣಿಸಿದ ಸಚಿವರು, ನಾವೀನ್ಯತೆಯ ವೇಗವನ್ನು ಹೆಚ್ಚಿಸಲು ಬೃಹತ್ ರಕ್ಷಣಾ ಕಾರ್ಯಕ್ರಮಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸಂಯೋಜಿಸುವುದು ಅತ್ಯಗತ್ಯ ಎಂದು ಪ್ರತಿಪಾದಿಸಿದರು.

***************

ಭಾರತದ ಜೈವಿಕ ಆರ್ಥಿಕತೆ ೧೯೫.೭ ಶತಕೋಟಿ ಅಮೆರಿಕನ್ ಡಾಲರ್ ತಲುಪುವ ಮೂಲಕ ಅಭೂತಪೂರ್ವ ಏರಿಕೆ ಕಂಡಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಜೈವಿಕ ತಂತ್ರಜ್ಞಾನ, ಕೈಗಾರಿಕಾ ಸಂಶೋಧನಾ ಸಹಾಯ ಮಂಡಳಿಯ ೧೪ನೇ ಸಂಸ್ಥಾಪನಾ ದಿನದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ೨೦೧೪ರಲ್ಲಿ ಕೇವಲ ೧೦ ಶತಕೋಟಿ ಡಾಲರ್ ಇದ್ದ ದೇಶದ ಜೈವಿಕ ಆರ್ಥಿಕತೆ ಕೇವಲ ಒಂದು ದಶಕದಲ್ಲಿ ಸುಮಾರು ೨೦ ಪಟ್ಟು ವೃದ್ಧಿಸಿರುವುದು ಗಮನಾರ್ಹ ಸಾಧನೆಯಾಗಿದೆ ಎಂದು ತಿಳಿಸಿದರು.

ಭಾರತ ಪ್ರಬಲ ವಿಜ್ಞಾನಿಗಳು, ಉದ್ದಿಮೆಗಳು ಮತ್ತು ನವೋದ್ಯಮಗಳ ಬೆಂಬಲದೊಂದಿಗೆ ೨೦೩೦ರ ವೇಳೆಗೆ ೩೦೦ ಶತಕೋಟಿ ಡಾಲರ್ ಜೈವಿಕ ಆರ್ಥಿಕತೆಯ ಗುರಿಯತ್ತ ಸ್ಥಿರವಾಗಿ ಸಾಗಿದೆ. ದೇಶದಲ್ಲಿ ಜೈವಿಕ ತಂತ್ರಜ್ಞಾನ ನವೋದ್ಯಮಗಳ ಸಂಖ್ಯೆ ೧೨ ಸಾವಿರ ಗಡಿ ದಾಟಿದೆ.

***************

ಭಾರತೀಯ ಜನತಾ ಪಾರ್ಟಿ ಪಶ್ಚಿಮ ಬಂಗಾಳ ವಿಧಾನಸಭೆಗೆ ತನ್ನ ೧೧೧ ಅಭ್ಯರ್ಥಿಗಳ ಎರಡನೇ ಪಟ್ಟಿಯನ್ನು ಇಂದು ಬಿಡುಗಡೆ ಮಾಡಿದೆ.

ಇದರೊಂದಿಗೆ ಅಸ್ಸಾಂ ವಿಧಾನಸಭಾ ಚುನಾವಣೆಗೂ ತನ್ನ ೮೮ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಪಕ್ಷ ಪ್ರಕಟಿಸಿದೆ. ಪ್ರಮುಖವಾಗಿ ಪಟ್ಟಿಯ ಪ್ರಕಾರ ಅಸ್ಸಾಂ ಮುಖ್ಯಮಂತ್ರಿ ಹಿಮಂತ್ ಬಿಸ್ವಾಸರ್ಮಾ ಜಲುಕ್ ಬಾರಿ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ.

***************

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಆರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿಯ ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಎಂ.ಆರ್.ಅರ್ಜುನ್ ಮತ್ತು ಹರಿಹರನ್ ಅಂಸಕರುಣನ್ ಜೋಡಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದೆ.

ಇಂದು ನಡೆದ ೧೬ರ ಸುತ್ತಿನ ಪಂದ್ಯದಲ್ಲಿ ಭಾರತದ ಜೋಡಿ ಸ್ಕಾಟ್‌ಲ್ಯಾಂಡ್‌ನ ಆಡಮ್ ಪ್ರಿಂಗ್ಲೆ ಮತ್ತು ಅಲೆಗ್ಸಾಂಡರ್ ಡೂನ್ ಜೋಡಿ ವಿರುದ್ಧ ೨೬-೨೪, ೨೧-೧೪ ಅಂತರದಲ್ಲಿ ಗೆಲುವು ದಾಖಲಿಸಿದೆ.

ಇಂದು ನಡೆಯಲಿರುವ ಪುರುಷರ ಸಿಂಗಲ್ಸ್ ವಿಭಾಗದ ಪಂದ್ಯದಲ್ಲಿ ಭಾರತದ ಆಯುಶ್ ಶೆಟ್ಟಿ ಜಪಾನ್‌ನ ಯುದಾಯಿ ಒಕಿಮೊತೊ ವಿರುದ್ಧ ಸೆಣಸಲಿದ್ದಾರೆ. ಮಹಿಳಾ ಸಿಂಗಲ್ಸ್‌ನಲ್ಲಿ ಅನ್ಮೊಲ್ ಖಾರ್ಬ್ ಮತ್ತು ತನ್ವಿರ್ ಶರ್ಮಾ ಸೆಣಸಲಿದ್ದರೆ, ಇಶಾರಾಣಿ ಬರುವಾಹ್ ಮತ್ತು ಮಾಳ್ವಿಕಾ ಬಂನ್ಸೊದ್ ಪ್ರತ್ಯೇಕ ಪಂದ್ಯದಲ್ಲಿ ಕಣಕ್ಕಿಳಿಯುತ್ತಿದ್ದಾರೆ. ಇನ್ನು ಮಿಶ್ರ ಡಬಲ್ಸ್‌ನಲ್ಲಿ ರೋಹನ್ ಕಪೂರ್ ಮತ್ತು ಋತ್ವಿಕಾ ಗಡ್ಡೆ ಜೋಡಿ ಫ್ರಾನ್ಸ್ ಜೋಡಿ ವಿರುದ್ಧ ಕಣಕ್ಕಿಳಿಯುತ್ತಿದೆ.

***************

ದೇಶಾದ್ಯಂತ ಇಂದು ಚೈತ್ರ ಶುಕ್ಲಾದಿ, ಯುಗಾದಿ, ಗುಡಿ ಪಾಡ್ವಾ, ಚೇತಿ ಚಾಂದ್, ನವ್ರೇಹ್ ಮತ್ತು ಸಾಜಿಬು ಚೈರೋಬಾ ಹಬ್ಬಗಳನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಈ ಪವಿತ್ರ ದಿನ ಚೈತ್ರ ನವರಾತ್ರಿಯ ಆರಂಭವನ್ನೂ ಸೂಚಿಸುತ್ತದೆ. ಈ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ದೇಶದ ಸಮಸ್ತ ಜನತೆಗೆ ಶುಭಾಷಯ ಕೋರಿದ್ದಾರೆ.

*******ಮುಕ್ತಾಯ*******